**ಕರ್ನಾಟಕ ಸರ್ಕಾರ**

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಸಂಖ್ಯೆ :** ಇಡಿ/ಕೆಇಎ/ಕೆಸೆಟ್/2022-23 **ದಿನಾಂಕ:** 11-09-2023

# ಸಂಕ್ಷಿಪ್ತ ಅಧಿಸೂಚನೆ

## ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ-2023 (ಕೆಸೆಟ್ – 2023)

ಕರ್ನಾಟಕ ಸರ್ಕಾರದ ನಿರ್ದೇಶನದಂತೆ, ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ-2023 (ಕೆಸೆಟ್-2023) ಅನ್ನು **26 ನವೆಂಬರ್ 2023 (ಭಾನುವಾರ)**ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆಯಲಾಗಿದೆ.

**1. ಪರೀಕ್ಷೆಯ ವಿವರಗಳು :**

ಪರೀಕ್ಷೆಯು ಎರಡು ಪತ್ರಿಕೆಗಳನ್ನು ಒಳಗೊಂಡಿದ್ದು, ವಿವರಗಳು ಈ ಕೆಳಗಿನಂತಿದೆ.

| ಅವಧಿ | ಪತ್ರಿಕೆ | ಅಂಕಗಳು | ಪ್ರಶ್ನೆಗಳ ಸಂಖ್ಯೆ | ಅವಧಿ |
|---|---|---|---|---|
| ಮೊದಲನೇ ಅವಧಿ | I | 100 | 50 ಪ್ರಶ್ನೆಗಳು ಕಡ್ಡಾಯವಾಗಿರುತ್ತವೆ. | 1 ಗಂಟೆ (10.00 ರಿಂದ 11.00 ರವರೆಗೆ) |
| ಎರಡನೇ ಅವಧಿ | II | 200 | 100 ಪ್ರಶ್ನೆಗಳು ಕಡ್ಡಾಯವಾಗಿರುತ್ತವೆ | 2 ಗಂಟೆ (12.00 ರಿಂದ 02.00 ರವರೆಗೆ) |

**ಪತ್ರಿಕೆ – I : ಸಾಮಾನ್ಯ ಪತ್ರಿಕೆಯು ಬೋಧನೆ ಮತ್ತು ಬುದ್ಧಿ ಸಾಮರ್ಥ್ಯಕ್ಕನುಗುಣವಾಗಿರುತ್ತದೆ.**

ಈ ಪತ್ರಿಕೆಯು ಅಭ್ಯರ್ಥಿಗಳ ಸಾಮಾನ್ಯ ಪತ್ರಿಕೆಯಾಗಿದ್ದು, ಸಾಮಾನ್ಯ ಜ್ಞಾನ, ಬೋಧನೆ ಹಾಗೂ ಸಂಶೋಧನೆಯ ಅಭಿರುಚಿಗೆ ಸಂಬಂಧಿಸಿರುತ್ತದೆ. ಅಭ್ಯರ್ಥಿಗಳ ಸಾಮಾನ್ಯ ತಿಳಿವಳಿಕೆಗಳನ್ನು ಗ್ರಹಿಸುವ ಹಾಗೂ ಯೋಚನಾ ಸಾಮರ್ಥ್ಯವನ್ನು ಅಳೆಯುವಂತಹದ್ದಾಗಿರುತ್ತದೆ. ಈ ಪತ್ರಿಕೆಯು 50 ಬಹುಸಂಖ್ಯಾ ಆಯ್ಕೆಯ ಪ್ರಶ್ನೆಗಳನ್ನು ಒಳಗೊಂಡಿದ್ದು, ಪ್ರತಿ ಪ್ರಶ್ನೆಗೆ ಎರಡು ಅಂಕಗಳಿರುತ್ತದೆ. ಹಾಗೂ ಎಲ್ಲಾ ಪ್ರಶ್ನೆಗಳಿಗೂ ಕಡ್ಡಾಯವಾಗಿ ಉತ್ತರಿಸಬೇಕಾಗಿರುತ್ತದೆ.

**ಪತ್ರಿಕೆ – II : ವಿಷಯ ಪತ್ರಿಕೆ**

ಅಭ್ಯರ್ಥಿಯು ಆಯ್ಕೆ ಮಾಡಿದ ವಿಷಯದ ಸಾಮಾನ್ಯ ಜ್ಞಾನದಲ್ಲಿ ಈ ಪತ್ರಿಕೆಯು ಇರುತ್ತದೆ. ಈ ಪತ್ರಿಕೆಯು 100 ಕಡ್ಡಾಯ ಬಹುಸಂಖ್ಯಾ ಆಯ್ಕೆ ಪ್ರಶ್ನೆಗಳನ್ನು ಒಳಗೊಂಡಿದ್ದು, ಪ್ರತಿ ಪ್ರಶ್ನೆಗೂ 2 ಅಂಕಗಳಿರುತ್ತವೆ. ಗರಿಷ್ಠ 200 ಅಂಕಗಳಿರುತ್ತವೆ.

**ಟಿಪ್ಪಣಿ :**

1) ತಪ್ಪಾದ ಉತ್ತರಗಳಿಗೆ ಋಣಾತ್ಮಕ ಮೌಲ್ಯಮಾಪನವಿರುವುದಿಲ್ಲ.

2) ಸಾಮಾನ್ಯ ಪತ್ರಿಕೆ ಹಾಗೂ 41 ವಿಷಯಗಳ ಪಠ್ಯಕ್ರಮವನ್ನು ಪ್ರಾಧಿಕಾರದ ವೆಬ್‌ಸೈಟ್ (http://kea.kar.nic.in) ನಲ್ಲಿ ನೀಡಲಾಗಿದೆ.

**2. ಅರ್ಜಿ ಸಲ್ಲಿಸುವ ವಿಧಾನ :**

ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ತೋರಿಸಿರುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಬೇಕು ಹಾಗೂ ಕೇವಲ ಗಣಕೀಕೃತ ಅಂಚೆ ಕಛೇರಿಯ ಶಾಖೆಗಳಲ್ಲಿ ಮಾತ್ರ ಅರ್ಜಿ ಪಾವತಿಸಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 11-09-2023 |
| ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ | 30-09-2023 |
| ಇ-ಪೋಸ್ಟ್ ಆಫೀಸ್‌ನಲ್ಲಿ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 03-10-2023 |

**3. ಪರೀಕ್ಷಾ ಶುಲ್ಕ :**

| ವರ್ಗ | ಶುಲ್ಕ |
|---|---|
| ಸಾಮಾನ್ಯ ವರ್ಗ, ಪ್ರವರ್ಗ II-A, II-B, III-A, III-B | ರೂ.1,000/- |
| ಪ್ರವರ್ಗ – I, SC, ST, PWD, Transgender | ರೂ.700/- |

4. ಕೆಸೆಟ್-2023 ಪರೀಕ್ಷೆ ತೆಗೆದುಕೊಳ್ಳಲು ಯಾವುದೇ ಗರಿಷ್ಟ ವಯೋಮಿತಿ ಇರುವುದಿಲ್ಲ.

5. ಕೆಸೆಟ್-2023 ಪರೀಕ್ಷೆಯನ್ನು ತೆಗೆದುಕೊಳ್ಳಲು ಬಯಸುವ ಅಭ್ಯರ್ಥಿಗಳು, ಪರೀಕ್ಷಾ ಕೇಂದ್ರ, ವಿಷಯಗಳ ಕೋಡ್‌ಗಳು, ಅರ್ಜಿ ಸಲ್ಲಿಸುವ ವಿಧಾನ ಇತ್ಯಾದಿ ವಿವರಗಳಿಗಾಗಿ ಪ್ರಾಧಿಕಾರದ ವೆಬ್‌ಸೈಟ್ (http://kea.kar.nic.in) ನಲ್ಲಿ ಪ್ರಕಟಿಸಲಾಗಿರುವ ವಿವರವಾದ ಅಧಿಸೂಚನೆಯನ್ನು ಓದಿಕೊಳ್ಳುವುದು.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012

ದೂರವಾಣಿ : 080 – 23460460, ಇಮೇಲ್ : keakset2023@gmail.com, ವೆಬ್‌ಸೈಟ್: http://kea.kar.nic.in